ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜಂ ನಿ : ಸುಮಪ : 2021–22 ದಿನಾಂಕ : 18–11–2021

# ಪತ್ರಿಕಾ ಪ್ರಕಟಣೆ

## PRESS RELEASE

### ಶಿಮ್ಲಾದಲ್ಲಿ 82ನೇ ಪೀಠಾಸೀನಾಧಿಕಾರಿಗಳ ಸಮ್ಮೇಳನ

### ವಿಧಾನ ಮಂಡಲಗಳಿಗೆ ಆರ್ಥಿಕ ಸ್ವಾಯತ್ತತೆ – ಬಜೆಟ್‌ನಲ್ಲಿ ಹಣ ಮೀಸಲಿಡುವಂತೆ ಸಭಾಪತಿ ಬಸವರಾಜ ಹೊರಟ್ಟಿ ಮನವಿ.

ಬೆಂಗಳೂರು, ನವೆಂಬರ್ 18 (ಕರ್ನಾಟಕ ವಾರ್ತೆ) :

ವಿಧಾನ ಮಂಡಲಗಳ ಸ್ವತಂತ್ರ ನಿರ್ವಹಣೆ ಹಾಗೂ ಪಕ್ಷಾತೀತ ಕಾರ್ಯನಿರ್ವಹಣೆ ದೃಷ್ಠಿಯಿಂದ ಅವುಗಳಿಗೆ ಆರ್ಥಿಕ ಸ್ವಾಯತ್ತತೆ ನೀಡುವುದು ಅಗತ್ಯವಾಗಿದ್ದು, ಆ ನಿಟ್ಟಿನಲ್ಲಿ ಆಯವ್ಯಯದಲ್ಲಿ ಪ್ರತ್ಯೇಕ ಬಜೆಟ್ ಮೀಸಲಿಡಬೇಕೆಂದು ಕರ್ನಾಟಕ ವಿಧಾನ ಪರಿಷತ್ತು ಸಭಾಪತಿ ಬಸವರಾಜ ಹೊರಟ್ಟಿ ಮನವಿ ಮಾಡಿದರು.

ಶಿಮ್ಲಾದಲ್ಲಿ ನಡೆದ 2 ದಿನಗಳ 82ನೇ ಅಖಿಲ ಭಾರತ ಪೀಠಾಸೀನಾಧಿಕಾರಿಗಳ ಸಮ್ಮೇಳನ ಮತ್ತು ಶತಮಾನೋತ್ಸವ ಸಮಾರಂಭದಲ್ಲಿ ಸಮ್ಮೇಳನದ ನಿರ್ಣಯ ಕುರಿತ ಸಭೆಯಲ್ಲಿ ಮಾತನಾಡಿದ ಶ್ರೀ ಬಸವರಾಜ ಹೊರಟ್ಟಿ ವಿಧಾನ ಮಂಡಲದ ಸಚಿವಾಲಯಕ್ಕೆ ಆರ್ಥಿಕ ಸ್ವಾಯತ್ತತೆ ಮತ್ತು ಸ್ವಾಯತ್ತ ಸ್ಥಾನ–ಮಾನ ನೀಡುವ ಕುರಿತು ಸಮ್ಮೇಳನ ಪೂರಕ ನಿರ್ಣಯ ಸ್ವೀಕರಿಸಿ, ಸದನಗಳ ಗೌರವ, ಘನತೆ ಹಾಗೂ ಪ್ರಾಮುಖ್ಯತೆ ಹೆಚ್ಚಿಸಬೇಕು. ಈ ನಿಟ್ಟಿನಲ್ಲಿ ಲೋಕ ಸಭಾಧ್ಯಕ್ಷರು ನಿರ್ಣಯ ಅಂಗೀಕರಿಸುವ ಮೂಲಕ ಸೂಕ್ತ ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದರು,

ಸಭಾಪತಿ ಬಸವರಾಜ ಹೊರಟ್ಟಿರವರ ಮನವಿಗೆ ಸಕರಾತ್ಮಕವಾಗಿ ಸ್ಪಂದಿಸಿದ ಲೋಕ ಸಭಾಧ್ಯಕ್ಷರಾದ ಮಾನ್ಯ ಶ್ರೀ ಓಂಬಿರ್ಲಾ ಈ ಕುರಿತು ಕೂಡಲೇ ಎಲ್ಲಾ ರಾಜ್ಯಗಳ ಮುಖ್ಯಮಂತ್ರಿಗಳಿಗೆ ಪತ್ರ ಬರೆದು ಮನವಿ ಮಾಡಲಾಗುವುದು ಎಂದರು.

ವಿಧಾನ ಮಂಡಲದ ಆಡಳಿತವನ್ನು ಕಾಗದ ರಹಿತವನ್ನಾಗಿಸಲು "ಇ ವಿಧಾನ್" ತಂತ್ರಜ್ಞಾನ ಅಳವಡಿಕೆಗೆ ಕೂಡಲೇ ಕ್ರಮ ಕೈಗೊಳ್ಳುವಂತೆ ಸಭಾಪತಿ ಬಸವರಾಜ ಹೊರಟ್ಟಿ ಮಾಡಿದ ಮನವಿಗೆ ತಕ್ಷಣವೇ ಸ್ಪಂದಿಸಿದ ಸಭೆ ಈ ಕುರಿತು ಅಗತ್ಯ ಕ್ರಮ ಕೈಗೊಳ್ಳುವ ಬಗ್ಗೆ ಸಭೆ ತೀರ್ಮಾನಿಸಿತು.

ಸದನದಲ್ಲಿ ಸದಸ್ಯರ ನಡವಳಿಕೆ, ನೀತಿ ನಿಯಮಗಳ ಪಾಲನೆ ಸೇರಿದಂತೆ, ವಿವಿಧ ವಿಷಯಗಳ ಕುರಿತು 2 ದಿನಗಳ ಸಮ್ಮೇಳನದಲ್ಲಿ ಕೈಗೊಂಡ ಎಲ್ಲಾ ನಿರ್ಣಯಗಳನ್ನು ಯಥಾವತ್ತಾಗಿ ಅನುಷ್ಠಾನಗೊಳಿಸಲು ಲೋಕಸಭಾಧ್ಯಕ್ಷರು ಕ್ರಮ ಕೈಗೊಳ್ಳುವಂತೆ ಸಭಾಪತಿ ಬಸವರಾಜ ಹೊರಟ್ಟಿ ಮನವಿ ಮಾಡಿದರು. ಸಭಾಪತಿಗಳ ಮನವಿಗೆ ಸಹಮತ ವ್ಯಕ್ತ ಪಡಿಸಿದ ಲೋಕಸಭಾಧ್ಯಕ್ಷ ಶ್ರೀ ಓಂ ಬಿರ್ಲಾ ಸದನದಲ್ಲಿ ಕೈಗೊಳ್ಳುವ ಎಲ್ಲಾ ನಿರ್ಣಯಗಳ ಜಾರಿಗೆ ಸಂಬಂಧಪಟ್ಟವರಿಗೆ ಮನವಿ ಮಾಡಲಾಗುವುದು. ದೇಶದ ಎಲ್ಲಾ ವಿಧಾನ ಮಂಡಲಗಳಲ್ಲಿ ಆಧುನಿಕ ತಂತ್ರಜ್ಞಾನ ಅಳವಡಿಸಿ, ಪಾರದರ್ಶಕ ಹಾಗೂ ಸುಗಮ ಕಲಾಪಕ್ಕೆ ಕ್ರಮ ಕೈಗೊಳ್ಳಲಾಗುವುದು ಎಂದರು.

ರಾಜ್ಯಸಭೆಯ ಉಪಸಭಾಪತಿ ಶ್ರೀ ಹರಿವಂಶ್ ನಾರಾಯಣ ಸಿಂಗ್ ಮಾತನಾಡಿ, ಮೊದಲ ಪೀಠಾಸೀನಾಧಿಕಾರಿಗಳ ಸಮ್ಮೇಳನ 1921ರಲ್ಲಿ ಹಿಮಾಚಲ ಪ್ರದೇಶದಲ್ಲಿಯೇ ನಡೆದಿದ್ದು, ಇದೀಗ ಶತಮಾನೋತ್ಸವವೂ ಸಹ ಹಿಮಾಚಲ ಪ್ರದೇಶದಲ್ಲಿ ನಡೆಯುತ್ತಿರುವುದು ಸಂತಸದ ಸಂಗತಿ ಎಂದರು.

ಹಿಮಾಚಲ ಪ್ರದೇಶದ ರಾಜ್ಯಪಾಲ ರಾಜೇಂದ್ರ ವಿಶ್ವನಾಥ್ ಅರ್ಲೇಕರ್ 2 ದಿನಗಳ ಸಮ್ಮೇಳನ ಫಲಪ್ರದವಾಗಿದೆ. ಪ್ರಜಾಪ್ರಭುತ್ವದ ಯಶಸ್ಸಿಗೆ ಸಮ್ಮೇಳನದಲ್ಲಿ ಕೈಗೊಂಡ ನಿರ್ಣಯಗಳನ್ನು ಜಾರಿಗೊಳಿಸಿ ಪ್ರಜಾಸತ್ತಾತ್ಮಕ ಮೌಲ್ಯಗಳ ಬಲವರ್ಧನೆಗೆ ಎಲ್ಲರೂ ಕೈಜೋಡಿಸಬೇಕೆಂದು ಮನವಿ ಮಾಡಿದರು.

ಕರ್ನಾಟಕ ವಿಧಾನ ಸಭಾಧ್ಯಕ್ಷರಾದ ವಿಶ್ವೇಶ್ವರ ಹೆಗಡೆ ಕಾಗೇರಿ, ಹಿಮಾಚಲ ಪ್ರದೇಶದ ವಿಧಾನ ಸಭಾಧ್ಯಕ್ಷ ವಿಪಿನ್ ಸಿಂಗ್ ಪರಮಾರ್ ಸೇರಿದಂತೆ, ವಿವಿಧ ರಾಜ್ಯಗಳ ವಿಧಾನ ಸಭಾಧ್ಯಕ್ಷರು ಹಾಗೂ ಸಭಾಪತಿಗಳು ಪಾಲ್ಗೊಂಡಿದ್ದರು.

## ಗ್ರಾಹಕ ಸಂವಾದ ಸಭೆ

ಬೆಂಗಳೂರು, ನವೆಂಬರ್ 18 (ಕರ್ನಾಟಕ ವಾರ್ತೆ) :

ಬೆಸ್ಕಾಂನ ಎಲ್ಲಾ ಉಪವಿಭಾಗಗಳಲ್ಲಿ ಪ್ರತಿ ತಿಂಗಳ ಮೂರನೇ ಶನಿವಾರದಂದು ಮಧ್ಯಾಹ್ನ 3 ರಿಂದ 5.30ರವರೆಗೆ ನಡೆಯುವ ಗ್ರಾಹಕ ಸಂವಾದ ಸಭೆಯಲ್ಲಿ ಗ್ರಾಹಕ ಬಾಂಧವರು ಪಾಲ್ಗೊಂಡು ವಿದ್ಯುತ್ ಸಂಬಂಧಿತ ಸಮಸ್ಯೆಗಳನ್ನು ಬೆಸ್ಕಾಂನ ಅಧಿಕಾರಿಗಳೊಂದಿಗೆ ಚರ್ಚಿಸಿ ಪರಿಹರಿಸಿಕೊಳ್ಳಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಗಣಿ ಮತ್ತು ಭೂವಿಜ್ಞಾನ ಸಚಿವರ ಪ್ರವಾಸ

ಬೆಂಗಳೂರು, ನವೆಂಬರ್ 16 (ಕರ್ನಾಟಕ ವಾರ್ತೆ):

ಗಣಿ ಮತ್ತು ಭೂವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕೊಪ್ಪಳ ಮತ್ತು ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಆಚಾರ ಹಾಲಪ್ಪ ಬಸಪ್ಪ ಅವರು ನವೆಂಬರ್ 18, 19 ಹಾಗೂ 20 ರಂದು ಬಳ್ಳಾರಿ, ರಾಯಚೂರು, ಯಾದಗಿರಿ ಮತ್ತು ಕಲಬುರಗಿ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಸೂರ್ಯಕಾಂತಿ ಬೆಳೆ ಬೆಳೆಯುವ ರೈತರ ಗಮನಕ್ಕೆ

ಬೆಂಗಳೂರು, ನವೆಂಬರ್ 16 (ಕರ್ನಾಟಕ ವಾರ್ತೆ):

ರಾಜ್ಯದಲ್ಲಿ ಪ್ರಸ್ತುತ ಸೂರ್ಯಕಾಂತಿ ಬಿತ್ತನೆ ಬೀಜಗಳ ಕೊರತೆಯಿರುವುದರಿಂದ ಕೆಲವು ಅನಧಿಕೃತ ಬೀಜ ಕಂಪನಿಗಳು ಕಡಿಮೆ ಗುಣಮಟ್ಟದ ಸೂರ್ಯಕಾಂತಿ ಬಿತ್ತನೆ ಬೀಜಗಳನ್ನು ಮಾರಾಟ ಮಾಡುವ ಹಾಗೂ ಕೆಲವು ಬೀಜ ಪಂಪನಿಗಳು ಬೀಜಗಳನ್ನು ಗರಿಷ್ಠ ಮಾರಾಟ ದರಕ್ಕಿಂತ ಹೆಚ್ಚಿನ ದರಗಳಲ್ಲಿ ಅಥವಾ ಬಿಲ್ಲು ನೀಡದೆ ಮಾರಾಟ ಮಾಡುವ ಸಾಧ್ಯತೆ ಇರುತ್ತದೆ. ಇಂತಹ ಬೀಜಗಳು ಕಡಿಮೆ ಮೊಳಕೆ ಪ್ರಮಾಣ ಉಳ್ಳದ್ದಾಗಿರಬಹುದು ಅಥವಾ ನಂತರದ ದಿನಗಳಲ್ಲಿ ಹೂ ಮತ್ತು ಕಾಯಿ ಕಟ್ಟದೇ ಇರಬಹುದು. ರೈತರು ಸೂರ್ಯಕಾಂತಿ ಬಿತ್ತನೆ ಬೀಜಗಳನ್ನು ಕೊಳ್ಳುವಾಗ ಅಧಿಕೃತ ಬೀಜ ಮಾರಾಟಗಾರರಿಂದಲೇ ಖರೀದಿಸುವುದು ಹಾಗೂ ಖರೀದಿಯ ನಂತರ ದೃಢೀಕೃತ ರಸೀದಿಯನ್ನು ಪಡೆಯುವುದು. ಹೀಗೆ ಪಡೆದ ರಸೀದಿಗಳನ್ನು ಬೆಳೆಯ ಕೊಯ್ಲಾಗುವವರೆಗೆ ಸಂರಕ್ಷಿಸಿಡುವುದು. ಅನಧಿಕೃತ ಬೀಜ ಮಾರಾಟಗಾರರು ರಸೀದಿ ನೀಡದೇ ಮಾರಾಟ ಮಾಡುವ ಬಿತ್ತನೆ ಬೀಜಗಳನ್ನು ಖರೀದಿಸಬಾರದು ಹಾಗೂ ಇಂತಹ ಅನಧಿಕೃತ ಬೀಜ ಮಾರಾಟಗಾರರು ಕಂಡು ಬಂದಲ್ಲಿ ಹಾಗೂ ಹೆಚ್ಚಿನ ದರಗಳಲ್ಲಿ ಮಾರಾಟ ಮಾಡುತ್ತಿರುವುದು ಕಂಡುಬಂದಲ್ಲಿ ಕೂಡಲೇ ಹತ್ತಿರದ ಕೃಷಿ ಇಲಾಖೆಯ ಕಚೇರಿಗಳಿಗೆ ದೂರು ನೀಡಬಹುದಾಗಿದೆ ಎಂದು ಕೃಷಿ ಇಲಾಖೆಯ ಆಯುಕ್ತರು ಅಧಿಕೃತ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## Hon’ble Upalokayukta Visited Kodigehalli Railway Underpass

Bengaluru, November 18, (Karnataka Information):

The Hon’ble Upalokayukta, Justice Sri B.S. Patil visited the Kodigehali Railway underpass on 13/10/2021 and noticed that due to delay in completion of drain work carried out by the Railway Department, rain water got stagnated on the public road causing serious impediment to the commuters to pass through the said Railway underpass and a suo-motu investigation has been taken up in this regard.

Reports were called for from the concerned officers of Road Infrastructure Division of BBMP Yelahanka and comments were received from them. Report is also called from Sri B. Rameshchandra, Deputy Chief Engineer, Central Constructions, South Western Railway and Chief Engineer, Road Infrastructure & Railway Project, BBMP, Bengaluru. Further, the Chief Engineer (Central Projects), BBMP, Bengaluru is instructed to complete the work and to redress the hardship caused to the residents, on top priority basis, within a time frame.

### Regarding news item telecast in TV9 Kannada news channel on 15/11/2021 in respect of sewerage water getting mixed with Kaveri water

Bengaluru, November 18, (Karnataka Information):

On noticing a news item telecast on 15/11/2021 in TV9 Kannada news channel which disclosed that Sewerage water was getting mixed with Kaveri water in Telecom Layout of HBR layout, and people who consumed the water without knowing it have developed vomiting and diarrhoea and having regard to the seriousness of the issue, the Hon’ble Upalokayukta Justice Sri B.S. Patil, directed the concerned Executive Engineer and Assistant Executive Engineer of BWSSB to submit a report regarding cause of the incident and the remedial action taken.

The Executive Engineer and Assistant Executive Engineer have jointly submitted a report dated 15/11/2021 stating that the problems have been attended. In order to verify the veracity of the incident, the Police Inspectors of Karnataka Lokayukta City Division were instructed to visit the spot and to furnish report by conducting spot inspection and contacting the local residents. The report has been obtained. The damage to the drinking Water pipe is repaired and the problem is solved. Further action in the matter is under progress. Serious

note of the matter is taken, so as to ensure that such things do not repeat and the guilty are dealt with.

## Dak Adalat

Bengaluru, November 18, (Karnataka Information):

A Dak Adalat will be held at the office of the Senior Superintendent of Post offices, Jayanagar Head Post office building (2nd floor), 11th main, 4th T Block, Bengaluru-560041 on 7th December 2021 at 11.00 hours. Grievances or complaints relating to postal Services viZ. delivery of mails, speed post articles, parcels, money orders, saving bank, cash certificates and counter undersigned by 04-12-2021 before 16.00 hours for redressal in the Adalat. Grievances can also be sent by email to email ID: dobangaloresouth.ka@indiapost.gov.in.

## ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ವಾಯುಗುಣಮಟ್ಟ ಮಾಪನ ಕೇಂದ್ರಗಳ ವಾಯುಗುಣಮಟ್ಟ ಸೂಚ್ಯಂಕ

ಬೆಂಗಳೂರು, ನವೆಂಬರ್ 18 (ಕರ್ನಾಟಕ ವಾರ್ತೆ) :

**ದಿನಾಂಕ: 18.11.2021 (Average of past 24 hours)**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯ ಕಾಲೇಜು, ಹೆಬ್ಬಾಳ | 52 | ತೃಪ್ತಿಕರ | $PM_{10}$ |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 54 | ತೃಪ್ತಿಕರ | $PM_{10}$ |
| 3 | ಕವಿಕ, ಮೈಸೂರುರಸ್ತೆ | 80 | ತೃಪ್ತಿಕರ | CO |
| 4 | ರಾಜೀವ್‌ಗಾಂಧಿ ಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೆಗೌಡನಗರ | 44 | ಉತ್ತಮ | CO |
| 5 | ಹೆಚ್.ಎಸ್.ಆರ್ ಲೇಔಟ್, ಕೇಂದ್ರರೇಷ್ಮೆ ಮಂಡಳಿ ಹತ್ತಿರ | 41 | ಉತ್ತಮ | CO |
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 74 | ತೃಪ್ತಿಕರ | CO |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, | 29 | ಉತ್ತಮ | $PM_{10}$ |
| **(18.11.2021 at 11.05 AM)** | | | | |
| 8 | BWSSB,ಕಾಡಬೀಸನಹಳ್ಳಿ | 50 | ಉತ್ತಮ | $NO_2$ |
| 9 | ಪೀಣ್ಯ | 64 | ತೃಪ್ತಿಕರ | $PM_{2.5}$ |
| 10 | ಬಿಟಿಎಂ ಲೇಔಟ್ | 81 | ತೃಪ್ತಿಕರ | CO |

| ವರ್ಗ(ಶ್ರೇಣಿ) | ಉಂಟಾಗಬಹುದಾದ ಆರೋಗ್ಯ ಪರಿಣಾಮಗಳು |
|---|---|
| **ಉತ್ತಮ (0–50)** | ಕನಿಷ್ಠ ಪರಿಣಾಮ |
| **ತೃಪ್ತಿಕರ (51–100)** | ಸೂಕ್ಷ್ಮ ಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| **ಸಾಧಾರಣ (101–200)** | ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| **ಕಳಪೆ (201–300)** | ದೀರ್ಘಕಾಲಿಕ ಒಡ್ಡುವಿಕೆಯಿಂದ ಜನರಿಗೆ ಉಸಿರಾಟದ ಅಸ್ವಸ್ಥತೆ |
| **ಅತಿ ಕಳಪೆ (301–400)** | ದೀರ್ಘಕಾಲಿಕ ಒಡ್ಡುವಿಕೆಯಿಂದ ಜನರಿಗೆ ಶ್ವಾಸಕೋಶದ ಅಸ್ವಸ್ಥತೆ |
| **ತೀವ್ರ (>401)** | ಆರೋಗ್ಯವಂತ ಜನರಿಗೂ ಉಸಿರಾಟದ ಅಸ್ವಸ್ಥತೆ |

## AQI of the CAAQM stations established in Bengaluru City

**Date : 18.11.2021 (Average of past 24 hours)**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 52 | Satisfactory | $PM_{10}$ |
| 2 | Jayanagar 5th Block, Shalini ground | 54 | Satisfactory | $PM_{10}$ |
| 3 | KAVIKA, Mysore Road | 80 | Satisfactory | CO |
| 4 | Rajeev Gandhi Institute of Chest Disease, NIMHANS, Hombegowda Nagar | 44 | Good | CO |
| 5 | HSR Layout, near Central Silkboard | 41 | Good | CO |
| 6 | City Railway Station, Magestic, Bengaluru | 74 | Satisfactory | CO |
| 7 | Saneguruvanahalli, NisargaBhavan, KSPCB, Shivanagara | 29 | Good | $PM_{10}$ |
| **(18.11.2021 at 11.05 AM)** 6758 | | | | |
| 8 | BWSSB, Kadabesanahalli | 50 | Good | $NO_2$ |
| 9 | Peenya | 64 | Satisfactory | $PM_{2.5}$ |

| | | | | |
|---|---|---|---|---|
| 10 | BTM Layout | 81 | Satisfactory | CO |

| Category (Range) | Possible Health Impacts | Category (Range) | Possible Health Impacts |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung,<br>Heart disease, children and older adults | Severe (>401) | Respiratory effects even on healthy people |